# ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
# ಹಾಗೂ ವಿಶೇಷ ನ್ಯಾಯಾಲಯ, ಹಾವೇರಿ
## ಸ್ಪೆಷಲ್ ಎಸ್.ಸಿ./ಎಸ್.ಟಿ.28/2025

Pw-08

Cw-12

| | |
|---|---|
| ಸಾಕ್ಷಿದಾರರ ಹೆಸರುಃ | ಶ್ರೀ ನೇಮಪ್ಪ ನಾಯಕ್ |
| ತಂದೆಃಗಂಡನ ಹೆಸರುಃ | ಶ್ರೀ ರಾಮಪ್ಪ |
| ವಯಸ್ಸುಃ | 54 ವರ್ಷ |
| ಉದ್ಯೋಗಃ | ಮುಖ್ಯ ಪೇದೆ-731, ಹಲಗೇರಿ ಪಿಎಸ್ |
| ವಾಸ ಸ್ಥಳಃ | ಹರಿಹರ |

**ದಿನಾಂಕ:03.07.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ**

1. ನಾನು ಕಳೆದ 04 ವರ್ಷಗಳಿಂದ ಹಲಗೇರಿ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆ-731 ಎಂದು ಕರ್ತವ್ಯ ನಿರ್ವಹಿಸುತ್ತಿದ್ದೇನೆ. ದಿನಾಂಕಃ17.04.2025 ರಂದು ಬೆಳಿಗ್ಗೆ 11.00 ಗಂಟೆ ಸಮಯದಲ್ಲಿ ನಾನು ಹಲಗೇರಿ ಪೊಲೀಸ್ ಠಾಣೆಯಲ್ಲಿ ಠಾಣಾಧಿಕಾರಿಯಾಗಿ ಕರ್ತವ್ಯದಲ್ಲಿದ್ದಾಗ ಈ ಪ್ರಕರಣದ ಪಿರ್ಯಾದಿ ಠಾಣೆಗೆ ಹಾಜರಾಗಿ ಒಂದು ಲಿಖಿತ ದೂರನ್ನು ಸಲ್ಲಿಸಿದರು. ಸದರಿ ದೂರನ್ನು ಸ್ವೀಕರಿಸಿಕೊಂಡು ಠಾಣಾ ಮೊಕದ್ದಮೆ ಸಂಖ್ಯೆ:75 ರಡಿಯಲ್ಲಿ ಭಾ.ನ್ಯಾ.ಸಂ.ಕಲಂ.118(1) ಮತ್ತು 352 ಸಹವಾಚಕ 3(5)ರಡಿಯಲ್ಲಿ ಮತ್ತು SC/ST (POA) ಕಾಯಿದೆ ಕಲಂ.3(1)(r) ರಡಿಯಲ್ಲಿ ಪ್ರಕರಣವನ್ನು ದಾಖಲುಮಾಡಿಕೊಂಡು ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೂ ಮತ್ತು ಮೇಲಾಧಿಕಾರಿಗಳಿಗೂ ಪಿಸಿ ನಂ.1236 ರವರ ಮೂಲಕ ಕಳಿಸಿಕೊಟ್ಟಿರುತ್ತೇನೆ.

2. ಸದರಿ ಲಿಖಿತ ದೂರನ್ನು ಈಗ ನೋಡುತ್ತಿದ್ದು, ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದ್ದು, ನನ್ನ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ಈಗಾಗಲೇ ನಿಪಿ-5 ಎಂದು ಗುರುತಿಸಲಾಗಿದ್ದು, ಅದರಲ್ಲಿ ನನ್ನ ಡಿಜಿಟಲ್ ಸಹಿ ಇರುತ್ತದೆ. ನಂತರ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-14 ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಪಾಟೀ ಸವಾಲುಃ 1 ಮತ್ತು 2 ನೇ ಆರೋಪಿತರ ಪರವಾಗಿ ಶ್ರೀ ಜಿ.ಎನ್.ಜಿ ವಕೀಲರಿಂದಃ**

3. ನಾನು ಆ ದಿನ ದಿನಾಂಕಃ17.04.2025 ರಂದು ಬೆಳಿಗ್ಗೆ 9.00 ರಿಂದ ಮಧ್ಯಾಹ್ನ 2.00 ಗಂಟೆಯತನಕ ಠಾಣಾಧಿಕಾರಿ ಕರ್ತವ್ಯದಲ್ಲಿದ್ದೆನು. ಸದರಿ ಹಿಂದಿನ ದಿನದಂದು ಘಟನೆಯ ಬಗ್ಗೆ ನನಗೆ ಯಾವುದೇ ವರ್ತಮಾನ ಬಂದಿರುವುದಿಲ್ಲ. ಯಾವುದೇ ಗುನ್ನೆಯಾಗದೇ ಇದ್ದರೂ ಸಹ ಪಿರ್ಯಾದಿಯು ಕೊಟ್ಟ ಸುಳ್ಳು ದೂರಿನ ಆಧಾರದ ಮೇಲೆ ಸುಳ್ಳು ಪ್ರಕರಣವನ್ನು ನೋಂದಣಿ ಮಾಡಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ. ಪಿರ್ಯಾದಿಯೇ ಆರೋಪಿತರ ಮೇಲೆ ಹಲ್ಲೆ ಮಾಡಿರುವುದು ನನ್ನ ಗಮನಕ್ಕೆ ಬಂದರೂ ಸಹ ನಾನು ಒತ್ತಡಕ್ಕೆ ಮಣಿದು ಆರೋಪಿತರ ವಿರುದ್ಧ ಸುಳ್ಳು ಗುನ್ನೆ ದಾಖಲು ಮಾಡಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇಲೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ
ನ್ಯಾಯಾಧೀಶರು ಮತ್ತು ವಿಶೇಷ ನ್ಯಾಯಾಧೀಶರು ಹಾವೇರಿ.